# <u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 949 |
| ಸದಸ್ಯರ ಹೆಸರು | : ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : 20/08/2025 |
| ಉತ್ತರಿಸುವ ಸಚಿವರು | : ಕಂದಾಯ ಸಚಿವರು. |

<table>
<tr><th>ಕ್ರ. ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಂದಾಯ ಕೃಷಿ ಭೂಮಿಯಲ್ಲಿ ಮನೆ ನಿರ್ಮಾಣ ಮಾಡಿಕೊಂಡಿರುವವರಿಗೆ ಮೂಲಭೂತ ಸೌಕರ್ಯ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ವಿವರ ನೀಡುವುದು)</td><td rowspan="2">ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 95 (1) ರ ಪರಂತುಕದಂತೆ ಕೃಷಿಕರು ಹೊಂದಿರುವ ಕೃಷಿ ಭೂಮಿಯ ನಿಯಮಿಸಬಹುದಾದಂತೆ ಭೂಮಿಯ ಅಂಥ ವಿಸ್ತೀರ್ಣದ ಪರಮಾವಧಿಗೊಳಪಟ್ಟು ಅವನು ಹೊಂದಿರುವ ವಿಸ್ತೀರ್ಣದ ಶೇಕಡ 10 ಮೀರದ ಜಾಗದಲ್ಲಿ ಫಾರ್ಮ್ ಹೌಸ್ ನಿರ್ಮಾಣ ಮಾಡಬಹುದಾಗಿರುತ್ತದೆ.<br><br>ರಾಜ್ಯದಲ್ಲಿ ನೆಲೆಸಿರುವ ಲಂಬಾಣಿ (ಬಂಜಾರ) ಗೊಲ್ಲ, ಭೋವಿ, ನಾಯಕ, ಸೋಲಿಗ, ಕಾಡುಕುರುಬ ಮುಂತಾದ ದುರ್ಬಲ ಸಮುದಾಯದ ಜನರು ವಾಸಿಸುವ ಹಲವು ವಸತಿ ಪ್ರದೇಶಗಳು ಹಿಡುವಳಿ ಜಮೀನುಗಳಲ್ಲಿ (ಕಂದಾಯ ಕೃಷಿ ಭೂಮಿಯಲ್ಲಿ) ಮನೆ ನಿರ್ಮಾಣಗೊಂಡು ಹಲವು ವರ್ಷಗಳಿಂದ ಅಸ್ತಿತ್ವದಲ್ಲಿರುವ ಜನರನ್ನು ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಕರ್ನಾಟಕ ಭೂಕಂದಾಯ ಕಾಯ್ದೆ 1964 ಕಲಂ 94ಡಿ ಮತ್ತು ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ರ ಕಲಂ 38-ಎ ಸೇರಿಸಿ ತಿದ್ದುಪಡಿಯನ್ನು ಮಾಡಿ ಮನೆ ನಿರ್ಮಾಣ ಮಾಡಿಕೊಂಡಿರುವವರಿಗೆ ಹಕ್ಕುಪತ್ರವನ್ನು ನೀಡಲು ಕ್ರಮವಹಿಸಲಾಗುತ್ತಿದೆ.</td></tr>
<tr><td>ಆ)</td><td>ಕಂದಾಯ ಭೂಮಿಯಲ್ಲಿರುವ ನಿವೇಶನದ ಅಥವಾ ಮನೆಗಳಿಗೆ ಇ-ಸ್ವತ್ತು/ ಇ-ಆಸ್ತಿಗಳನ್ನು ಅನಧೀಕೃತವಾಗಿ ನೀಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;</td></tr>
<tr><td>ಇ)</td><td>ಗ್ರಾಮ ಪಂಚಾಯಿತಿ/ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಕೃಷಿ ಭೂಮಿಯನ್ನು ಜಿಪಿಎ ಕರಾರು ಪತ್ರದ ಮೂಲಕ ಅನಧೀಕೃತವಾಗಿ ನಿವೇಶನ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಇಂತಹ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು)</td><td>ಕರ್ನಾಟಕ ಭೂಕಂದಾಯ ಅಧಿನಿಯಮ 1964ರ ಕಲಂ 96ರಲ್ಲಿ, ಬೇಸಾಯದ ಭೂಮಿಯನ್ನು ಅನುಮತಿ ಇಲ್ಲದೆ ಇತರ ಉದ್ದೇಶಕ್ಕಾಗಿ ಉಪಯೋಗಿಸುವುದಕ್ಕೆ ದಂಡ ವಿಧಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.</td></tr>
</table>

ಸಂಖ್ಯೆ: ಆರ್‌ಡಿ 147 ಎಲ್‌ಜಿಕ್ಯೂ 2025

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು